ಜಿಲ್ಲಾ ಪಂಚಾಯತ್ ಯೋಜನೆಯಡಿ ತಾಲ್ಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ. ಕುಸ್ತಿ ಕ್ರೀಡೆಯನ್ನು ಪ್ರೋತ್ಸಾಹಿಸಲಾಗುತ್ತಿದೆ. ಗ್ರಾಮ ಗರಡಿ ಮನೆಗಳನ್ನು ನಿರ್ಮಿಸಲು ಧನ ಸಹಾಯ ಮಾಡಲಾಗುತ್ತಿದೆ. ಗ್ರಾಮಾಂತರ ಪ್ರದೇಶಗಳಲ್ಲಿ ಕ್ರೀಡಾ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ. ಆಟದ ಮೈದಾನ ಅಭಿವೃದ್ಧಿ ಪಡಿಸಲು ಹೊನಲು ಬೆಳಕು ಸಲಕರಣೆಗಳನ್ನು ಕೊಂಡುಕೊಳ್ಳಲು ಆರ್ಥಿಕ ನೆರವನ್ನು ನೀಡಲಾಗುತ್ತಿದೆ.

ಮಂಡ್ಯ ನಗರದಲ್ಲಿ ಚಲನಚಿತ್ರ ಪ್ರಶಸ್ತಿ ಪ್ರಧಾನ

1226 (1692) ಶ್ರೀ ಎಂ.ಎನ್. ಆತ್ಮಾನಂದ (ಮಂಡ್ಯ) : ಮಾನ್ಯ ವಾರ್ತಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮಂಡ್ಯ ನಗರದಲ್ಲಿ 1998-99ನೇ ಸಾಲಿನ ಚಲನಚಿತ್ರ ಪ್ರಶಸ್ತಿ ಪ್ರಧಾನ ಸಮಾರಂಭವು ನಡೆಯಿತೆ?

ಆ) ಹಾಗಿದ್ದಲ್ಲಿ, ಈ ಚಲನಚಿತ್ರ ಪ್ರಶಸ್ತಿ ಪ್ರಧಾನ ಸಮಾರಂಭಕ್ಕೆ ತಗುಲಿದ ಖರ್ಚಿಷ್ಟು?

ಪ್ರೋ॥ ಬಿ. ಕೆ. ಚಂದ್ರಶೇಖರ್ (ವಾರ್ತಾ ಸಚಿವರು) :

ಅ) ಹೌದು.

ಆ) ರೂ. 20.00 ಲಕ್ಷಗಳು.

ಪುಸ್ತಕ ಪ್ರಾಧಿಕಾರಕ್ಕೆ ಸರ್ಕಾರದಿಂದ ನೀಡಿರುವ ಅನುದಾನ

1227(1693) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ರಾಜ್ಯದಲ್ಲಿ ಪುಸ್ತಕ ಪ್ರಾಧಿಕಾರವು ಕಾರ್ಯ ನಿರ್ವಹಿಸುತ್ತಾ ಇದೆಯೇ?

2) ಹಾಗಿದ್ದಲ್ಲಿ ಇದರ ಕಾರ್ಯವ್ಯಾಪ್ತಿ ಏನು?

3) ಪುಸ್ತಕ ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದಿಂದ ಈವರೆವಿಗೆ ನೀಡಿರುವ ಅನುದಾನವೆಷ್ಟು?

ಶ್ರೀ ಮತಿ ರಾಣಿಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯರು) :

1) ಹೌದು.

2) 1) ಕನ್ನಡ ಪುಸ್ತಕ ಪ್ರಕಟಣೆ

2) ಪುಸ್ತಕ ಸಗಟು ಖರೀದಿ

3) ಪುಸ್ತಕ ಕೊಡುಗೆ

4) ಪುಸ್ತಕ ಮೇಳ ಏರ್ಪಡಿಸುವುದು